ಇ) 2001–02ನೇ ಸಾಲಿನಲ್ಲಿ 1 ಕ್ವಿಂಟಾಲ್ ಸಕ್ಕರೆಯನ್ನು ಉತ್ಪಾದಿಸಲು 1.048 ಎಂ.ಟಿ. ಕಬ್ಬು ಬಳಕೆ ಮಾಡಲಾಗಿದೆ. ಸದರಿ ಕಬ್ಬಿನ ಬಾಬ್ತು ರೂ. 922–00ಗಳಂತೆ 1.048 ಮೆಟ್ರಿಕ್ ಟನ್‌ಗೆ ಪಾವತಿ ಮಾಡಲಾಗಿದೆ. (ಕಬ್ಬಿನ ತೆರೆಗೆ ಹೊರತು ಪಡಿಸಿ)

2002–03ನೇ ಸಾಲಿನಲ್ಲಿ 1 ಕ್ವಿಂಟಾಲ್ ಸಕ್ಕರೆಯನ್ನು ಉತ್ಪಾದಿಸಲು 1.099 ಎಂ.ಟಿ. ಕಬ್ಬು ಬಳಕೆ ಮಾಡಲಾಗಿದೆ. ಸದರಿ ಕಬ್ಬಿನ ಬಾಬ್ತು ರೂ. 889–00 ಗಳಂತೆ 1.099 ಮೆಟ್ರಿಕ್ ಟನ್‌ಗೆ ಪಾವತಿ ಮಾಡಲಾಗಿದೆ. (ಕಬ್ಬಿನ ತೆರೆಗೆ ಹೊರತು ಪಡಿಸಿ).

ಈ) 2002 ಡಿಸೆಂಬರ್ ದಿಂದ 2003 ಆಗಸ್ಟ್ ವರೆವಿಗೆ ಸಕ್ಕರೆ ಮಾರಾಟದ ಟೆಂಡರ್ ಪ್ರಕ್ರಿಯೆಯಲ್ಲಿ ಮುಕ್ತ ಮಾರುಕಟ್ಟೆ ಹಾಗೂ ರಫ್ತು ಮಾರಾಟ ವಹಿವಾಟುವಿನಲ್ಲಿ ಪಾರದರ್ಶಕ ಕಾಯ್ದೆಯನ್ನು ಉಲ್ಲಂಘಿಸಿರುವುದಿಲ್ಲ.

487(910) ಶ್ರೀ ರಾಮರೆಡ್ಡಿ.ಜಿ. ವಿ(ಬಾಗೇಪಲ್ಲಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದ ಬಾಲಕ ಬಾಲಕೀಯರ ವಸತಿ ನಿಲಯಗಳಿಗೆ ಪ್ರತಿ ವರ್ಷ ಅರ್ಹ ಪ್ರವೇಶಾಕಾಂಕ್ಷಿಗಳ ಸಂಖ್ಯೆ ಏರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಪ್ರಸ್ತುತ ವರ್ಷ ಹೊಸ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಉದ್ದೇಶಿಸಿದೆಯೆ;

ಇ) ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು

ಆ) 2003–04ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯನ್ವಯ ಉತ್ತರ ಕರ್ನಾಟಕದ ಏಳು ಹಿಂದುಳಿದ ಜಿಲ್ಲೆಗಳಿಗೆ ಈ ಸಾಲಿನಲ್ಲಿ 75 ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಯಾವುದೇ ಹೊಸ ವಿದ್ಯರ್ಥಿನಿಲಯ ಮಂಜೂರು ಮಾಡಲಾಗುವುದಿಲ್ಲ.

ಇ) ಉದ್ಭವಿಸುವುದಿಲ್ಲ.

488(911) : ಶ್ರೀರಾಮ ರೆಡ್ಡಿ ಜಿ.ವಿ (ಬಾಗೇಪಲ್ಲಿ) ಮಾನ್ಯ ಪಶುಸಂಗೋಪನೆ ಮತ್ತು ವಕ್ಫ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಗ್ರಾಮೀಣ ಭಾಗದ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ವೈದ್ಯರ ತೀವ್ರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಖಾಲಿಯಿರುವ ಪಶುವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ.

ಅ) ಬಂದಿದೆ.

ಶ್ರೀ ಮಿರಾಜುದ್ದೀನ್ ಎನ್. ಪಾಟೀಲ್ (ಪಶುಸಂಗೋಪನೆ ಮತ್ತು ವಕ್ಫ ಸಚಿವರು) :

1. 250 ಪಶುವೈದ್ಯಾಧಿಕಾರಿಗಳನ್ನು ವಿಶೇಷ ನೇರ ನೇಮಕಾತಿ ನಿಯಮ ಮೂಲಕ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

2. ಗುತ್ತಿಗೆ ಆಧಾರದ ಮೇಲೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 192 ಪಶುವೈದ್ಯಾಧಿಕಾರಿಗಳ ಸೇವೆಯನ್ನು ಸಕ್ರಮಗೊಳಿಸುವ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

489(912) : ಶ್ರೀ ಶ್ರೀರಾಮರಿಡ್ಡಿ .ಜಿ.ವಿ(ಬಾಗೆಪಲ್ಲಿ) ಮಾನ್ಯ ಸಕ್ಕರೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಅಮರೇಗೌಡ.ಎಲ್.ಪಾಟೀಲ್ಬಯ್ಯಮರ(ಸಕ್ಕರೆ ಸಚಿವರು)

ಅ) ಹೌದು

ಆ) ರಾಜ್ಯದಲ್ಲಿ ಅವನತಿಯಲ್ಲಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಪುನಃಶ್ಚೇತನದ ಬಗ್ಗೆ ಪರಿಶೀಲಿಸಲು ಸರ್ಕಾರವು ರಚಿಸಿರುವ ಸಚಿವ ಸಂಪುಟದ ಉಪ ಸಮಿತಿಯು ಸರ್ಕಾರಕ್ಕೆ ತನ್ನ ವರದಿಯನ್ನು ಈಗಾಗಲೇ ಸಲ್ಲಿಸಿದ್ದು, ಸದರಿ ವರದಿಯು ಸಹಕಾರ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

490(913) : ಶ್ರೀರಾಮರೆಡ್ಡಿ ಜಿ.ವಿ (ಭಾಗೇಪಲ್ಲಿ) ಮಾನ್ಯ ರೇಷ್ಮೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ರೇಷ್ಮೆ ಉದ್ಯಮವು ತೀವ್ರ ಸಂಕಷ್ಟ ಪರಿಸ್ಥಿತಿಯಲ್ಲಿದ್ದು ಇಡಿ ಉದ್ಯಮವೇ ಅಧಃಪತನದ ಹಾದಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಲಕ್ಷಾಂತರ ಜನ ಪುರುಷ ಮಹಿಳೆಯರು ಉದ್ಯೋಗಾವಕಾಶ ಕಲ್ಪಿಸುವ ಈ ಉದ್ಯಮವನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಜನ್ನಿಗಪ್ಪ (ರೇಷ್ಮೆ ಸಚಿವರು) :

ಅ) ಇಲ್ಲ

ಆ) ರಾಜ್ಯದಲ್ಲಿ ರೇಷ್ಮೆ ಉತ್ಪಾದನೆಯನ್ನು ಹೆಚ್ಚಿಸಿ ಎಲ್ಲಾ ವರ್ಗಗಳಿಗೂ ಉದ್ಯೋಗಾವಕಾಶ ಮತ್ತು ಆದಾಯಗಳನ್ನು ಹೆಚ್ಚಿಸುವ ಸಲುವಾಗಿ ಕೇಂದ್ರ ರೇಷ್ಮೆ ಮಂಡಳಿಯ ಸಹಕಾರದೊಂದಿಗೆ ಇಲಾಖೆಯು ಕೆಟಲಿಟಿಕ್ ಅಭಿವೃದ್ಧಿ ಯೋಜನೆಯಡಿ ಹಾಗೂ ಇನ್ನಿತರ ಯೋಜನೆಗಳಲ್ಲಿ ರೇಷ್ಮೆ ಉದ್ಯಮದಲ್ಲಿ ತೊಡಗಿರುವವರಿಗೆ ಕೆಳಕಂಡ ಸೌಲಭ್ಯ ಕಲ್ಪಿಸಲಾಗುತ್ತದೆ.

1. ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣಕ್ಕೆ ಸಹಾಯಧನ.
2. ರೇಷ್ಮೆ ಹುಳು ಸಾಕಾಣಿಕೆ ಸಲಕರಣೆಗಳಿಗೆ ಸಹಾಯಧನ.
3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಸಹಾಯಧನ.
4. ರೋಗ ನಿಯಂತ್ರಣಕ್ಕಾಗಿ ಸೋಂಕು ನಿವಾರಕಗಳ ಸರಬರಾಜು.
5. ಚಾಕಿ ಸಾಗಾಣಿಕೆ ಕೇಂದ್ರಗಳ ನಿರ್ಮಾಣ ಮತ್ತು ಸಲಕರಣೆಗಳಿಗೆ ಸಹಾಯಧನ.
6. ಹೊಸದಾಗಿ ರೇಷ್ಮೆ ಕೃಷಿ ಕೈಗೊಳ್ಳುವ ರೈತರಿಗೆ ತರಬೇತಿ ಮತ್ತು ಟೂಲ್‌ಕಿಟ್ ನೀಡುವುದು.